# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1047 |
| ಸದಸ್ಯರು ಹೆಸರು | : | ಶ್ರೀ ರಾಮೋಜಿಗೌಡ<br>(ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 12.03.2026 |
| ಉತ್ತರಿಸುವ ಸಚಿವರು | : | ಗೃಹ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಾಹನ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಹಾಗಿದ್ದಲ್ಲಿ, ಸಂಚಾರ ನಿಯಮ ಉಲ್ಲಂಘನೆಗಳಿಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಸಾರ್ವಜನಿಕರಿಗೆ ಸಂಚಾರ ನಿಯಮಗಳ ಬಗ್ಗೆ ಅರಿವು ಮೂಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಸಂಚಾರ ನಿಯಮ ಉಲ್ಲಂಘನೆಗಳಿಗೆ ಕಡಿವಾಣ ಹಾಕುವ ದೃಷ್ಟಿಯಿಂದ ಬೆಂಗಳೂರು ನಗರ ಸೇರಿದಂತೆ ರಾಜ್ಯದ ವಿವಿಧ ಘಟಕಗಳಾದ ಮೈಸೂರು ನಗರ, ಬೆಳಗಾವಿ ನಗರ, ಮಂಗಳೂರು ನಗರ, ಹುಬ್ಬಳ್ಳಿ-ಧಾರವಾಡ ನಗರ, ಕಲಬುರಗಿ ನಗರ, ಶಿವಮೊಗ್ಗ ಜಿಲ್ಲೆ, ತುಮಕೂರು ಜಿಲ್ಲೆ, ದಾವಣಗೆರೆ ಜಿಲ್ಲೆ, ಗದಗ ಜಿಲ್ಲೆ, ಬಾಗಲಕೋಟೆ ಜಿಲ್ಲೆ, ಯಾದಗಿರಿ ಜಿಲ್ಲೆ, ಬೆಂಗಳೂರು-ಮೈಸೂರು ಆಕ್ಸಿಸ್ ಕಂಟ್ರೋಲ್ಡ್ ರಾಷ್ಟ್ರೀಯ ಹೆದ್ದಾರಿಗೊಳಪಡುವ (ಮಂಡ್ಯ ಜಿಲ್ಲೆ, ಬೆಂಗಳೂರು ದಕ್ಷಿಣ, ರಾಮನಗರ) ಮೈಸೂರು ಜಿಲ್ಲೆಗಳಲ್ಲಿ ಸಂಪರ್ಕ ಸಹಿತ (ಭೌತಿಕವಾಗಿ ವಾಹನಗಳನ್ನು ತಡೆದು) ಮತ್ತು ಸಂಪರ್ಕ ರಹಿತ (ಭೌತಿಕವಾಗಿ ವಾಹನಗಳ ತಡೆಯದೆ) ನಿಯಮ ಜಾರಿಯಡಿಯಲ್ಲಿ ಸಂಚಾರ ನಿಯಮ ಉಲ್ಲಂಘನಾ ಪ್ರಕರಣಗಳನ್ನು ದಾಖಲು ಮಾಡಲು ಕ್ರಮ ಕೈಗೊಳ್ಳಲಾಗಿದೆ.<br><br>❖ ಸಂಪರ್ಕ ಸಹಿತ ನಿಯಮ ಜಾರಿಯಡಿಯಲ್ಲಿ, ಎಲ್ಲಾ ಸಂಚಾರ ಪೊಲೀಸ್ ಠಾಣೆಗಳಲ್ಲಿ ಎ.ಎಸ್.ಐ ಮತ್ತು ಅದಕ್ಕಿಂತ ಮೇಲ್ಪಟ್ಟ ದರ್ಜೆಯ ಅಧಿಕಾರಿಗಳಿಗೆ ಮತ್ತು ಎಲ್ಲಾ ಕಾನೂನು & ಸುವ್ಯವಸ್ಥೆ ಪೊಲೀಸ್ ಠಾಣೆಗಳಲ್ಲಿ ಪಿ.ಎಸ್.ಐ ಮೇಲ್ಪಟ್ಟ ದರ್ಜೆಯ ಅಧಿಕಾರಿಗಳಿಗೆ ಪಿ.ಡಿ.ಎ ಉಪಕರಣವನ್ನು ನೀಡಿದ್ದು, ಕಣ್ಣಿಗೆ ಗೋಚರಿಸುವ ಸಂಚಾರ ನಿಯಮ ಉಲ್ಲಂಘನೆಗಳನ್ನು(visible Traffic violations) ಮಾತ್ರ ಗುರುತಿಸಿ ಪ್ರಕರಣಗಳನ್ನು ದಾಖಲಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>❖ ಬೆಂಗಳೂರು ನಗರದಲ್ಲಿ ಸಂಪರ್ಕ ರಹಿತ ನಿಯಮ ಜಾರಿಯಡಿಯಲ್ಲಿ ಜಂಕ್ಷನ್‌ಗಳಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳಿಗೆ ಅಸ್ತ್ರಂ ಆಪ್ ಮುಖಾಂತರ ನಿಯಮ ಉಲ್ಲಂಘನೆಗಳನ್ನು ಸಾಕ್ಷ್ಯ ಸಮೇತ ದಾಖಲಿಸಿ, ನಿಯಮ ಉಲ್ಲಂಘನಾ ನೋಟೀಸ್‌ಗಳನ್ನು ನಿಯಮ ಉಲ್ಲಂಘನೆದಾರರ ವಿಳಾಸಕ್ಕೆ ಕಳುಹಿಸುವ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ. |

**ಸಂಚಾರ ನಿಯಮಗಳ ಬಗ್ಗೆ ಅರಿವು ಮೂಡಿಸಲು ಕೈಗೊಂಡಿರುವ ಕ್ರಮಗಳು:**

- ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟ್ವಿಟರ್, ಯೂಟ್ಯೂಬ್ ಹಾಗೂ ಇನ್‌ಸ್ಟಾಗ್ರಾಮ್‌ಗಳ ಮೂಲಕ ಸಂಚಾರ ನಿಯಮಗಳ ಪಾಲನೆಯ ಮಹತ್ವಗಳ ಬಗ್ಗೆ ಸಂದೇಶಗಳನ್ನು ರವಾನಿಸುವ ಹಾಗೂ ನಿಯಮ ಪಾಲನೆಯ ಬಗ್ಗೆ ಪೋಸ್ಟರ್‌ಗಳನ್ನು ಅಪ್‌ಲೋಡ್ ಮಾಡಲು ಎಲ್ಲಾ ಘಟಕಗಳಲ್ಲಿ ಕ್ರಮ ಕೈಗೊಳ್ಳಲಾಗಿರುತ್ತದೆ.
- ದಿನಾಂಕ: 01.01.2026 ರಿಂದ 31.01.206 ರವರೆಗೆ ರಸ್ತೆ ಸುರಕ್ಷತಾ ಮಾಸಾಚರಣೆಯನ್ನು ಎಲ್ಲಾ ಘಟಕಗಳಲ್ಲಿ ನಡೆಸಿದ್ದು, ಪ್ರತಿನಿತ್ಯ ರಸ್ತೆ ಸುರಕ್ಷತೆ ಹಾಗೂ ಸಂಚಾರ ನಿಯಮಗಳ ಪಾಲನೆಯ ಕುರಿತು ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲು ಕಾರ್ಯಕ್ರಮಗಳ ಪಟ್ಟಿಯನ್ನು ನಿಗದಿಪಡಿಸಿ, ರಸ್ತೆ ಸುರಕ್ಷತಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.
- ಎಲ್ಲಾ ಘಟಕಗಳಲ್ಲಿ ಶಾಲಾ / ಕಾಲೇಜು ಮಕ್ಕಳಿಗೆ ಸಂಚಾರ ನಿಯಮಗಳು ಮತ್ತು ಅವುಗಳ ಪಾಲನೆಯ ಮಹತ್ವ ಹಾಗೂ ನಿಯಮಗಳು ಮತ್ತು ಅವುಗಳ ಪಾಲನೆಯ ಮಹತ್ವ ಹಾಗೂ ರಸ್ತೆ ಸುರಕ್ಷತೆ ಬಗ್ಗೆ ತಿಳುವಳಿಕೆ ನೀಡುವ ಕಾರ್ಯಕ್ರಮವನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದ್ದು, ಆ ಮೂಲಕ ರಸ್ತೆ ಅಪಘಾತಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗುತ್ತಿದೆ. ವಿವಿಧ ಉದ್ಯೋಗ ಸ್ಥಳಗಳಲ್ಲಿ, ಆಟೋ ನಿಲ್ದಾಣ, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ, ಬಸ್ ಡಿಪೋಗಳಲ್ಲಿ, ಟ್ರಕ್ಸ್ ಟರ್ಮಿನಲ್ಸ್‌ಗಳ ಸ್ಥಳಗಳಲ್ಲಿ ಕಾನೂನಿನ ತಿಳುವಳಿಕೆಯನ್ನು ಮೂಡಿಸಲಾಗುತ್ತಿದೆ.
- ಎಲ್ಲಾ ಘಟಕಗಳಲ್ಲಿ ಸಾರ್ವಜನಿಕರಿಗೆ ಹಾಗೂ ವಾಹನ ಚಾಲಕರಿಗೆ ರಸ್ತೆ ನಿಯಮಗಳನ್ನು ಪಾಲಿಸುವಂತೆ ಜಾಗೃತಿ ಮೂಡಿಸಲಾಗುತ್ತಿದೆ.
- ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡುವ ಚಾಲಕ/ಸವಾರರುಗಳ ವಿರುದ್ಧ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
- ದ್ವಿ ಚಕ್ರ ವಾಹನ ಸವಾರರು ಗುಣಮಟ್ಟದ ಹೆಲ್ಮೆಟ್ ಧರಿಸುವಂತೆ ಮತ್ತು ವಾಹನಗಳನ್ನು ಸುರಕ್ಷಿತವಾಗಿ ಚಾಲನೆ ಮಾಡುವ ಬಗ್ಗೆ ತಿಳುವಳಿಕೆ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಎಲೆಕ್ಟ್ರಾನಿಕ್ ಮಾಧ್ಯಮಗಳ ಮೂಲಕ ಸಂಚಾರ ನಿಯಮಗಳ ಪಾಲನೆಯ ಮಹತ್ವ ಮತ್ತು ರಸ್ತೆ ಸುರಕ್ಷತೆ ಕುರಿತು ಅರಿವನ್ನು ಮೂಡಿಸಿ ರಸ್ತೆ ಅಪಘಾತಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.
- ಅಪಘಾತಗಳ ನಿಯಂತ್ರಣಕ್ಕಾಗಿ ಅಪಘಾತಗಳಿಗೆ ಕಾರಣವಾಗುವ ಪ್ರಮುಖ ಸಂಚಾರ ನಿಯಮ ಉಲ್ಲಂಘನೆಗಳಾದ ಮದ್ಯಪಾನ ಮಾಡಿ ವಾಹನ ಚಾಲನೆ, ಹೆಲ್ಮೆಟ್ ರಹಿತ ಚಾಲನೆ, ಹಾಗೂ ಇನ್ನಿತರೆ ಗುಣಾತ್ಮಕ ಪ್ರಕರಣಗಳ ಬಗ್ಗೆ ವಿಶೇಷ ಕಾರ್ಯಾಚರಣೆಯನ್ನು ಹಮ್ಮಿಕೊಂಡು ಅಪಘಾತ ನಿಯಂತ್ರಣ ಮಾಡಲಾಗುತ್ತಿದೆ.
- ವಾಹನಗಳ ವೇಗವನ್ನು ನಿಯಂತ್ರಿಸಲು ರಂಬ್ಲರ್ ಸ್ಟ್ರಿಪ್‌ಗಳನ್ನು ಹಾಕುವ ಬಗ್ಗೆ ಸಂಬಂಧಪಟ್ಟ ಪೌರಸಂಸ್ಥೆಗಳೊಂದಿಗೆ

<table>
<tr><td></td><td></td><td>ಚರ್ಚಿಸಿ ಮಾಹಿತಿಯನ್ನು ಸಲ್ಲಿಸಲಾಗಿದೆ.<br><br>❖ ರಸ್ತೆಯ ಹಾಗೂ ಸಿಗ್ನಲ್ ದೀಪಗಳ ಬದಿಗಳಲ್ಲಿ ಬೆಳೆದು ನಿಂತಿರುವ ಮರದ ಕೊಂಬೆಗಳನ್ನು ತೆರವುಗೊಳಿಸಿ ವಾಹನ ಸವಾರ/ಚಾಲಕರಿಗೆ ರಸ್ತೆಯು ಸ್ಪಷ್ಟವಾಗಿ ಗೋಚರಿಸುವಂತೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.</td></tr>
<tr><td>ಇ)</td><td>ಕಳೆದ ಮೂರು ವರ್ಷಗಳಿಂದ ಸಂಚಾರಿ ನಿಯಮ ಉಲ್ಲಂಘನೆಗೆ ವಿಧಿಸಿರುವ ದಂಡದ ಮೊತ್ತವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು);</td><td><table>
<tr><th>ವರ್ಷ</th><th>ಒಟ್ಟು ದಾಖಲಾಗಿರುವ ಸಂಚಾರಿ ನಿಯಮ ಉಲ್ಲಂಘನೆಯ ಪ್ರಕರಣಗಳು<br><br>(Total Cases booked)</th><th>ವಿಧಿಸಿರುವ ದಂಡ ಮೊತ್ತ<br>(Total fine amount imposed)</th></tr>
<tr><td>2023</td><td>12737946</td><td>680,70,20,942</td></tr>
<tr><td>2024</td><td>16297495</td><td>921,33,02,876</td></tr>
<tr><td>2025</td><td>16064622</td><td>920,89,50,630</td></tr>
</table></td></tr>
<tr><td>ಈ)</td><td>ಶೇಕಡ ಎಷ್ಟು ಪ್ರಮಾಣದ ದಂಡ ವಸೂಲಾತಿ ಮಾಡಲಾಗಿದೆ;</td><td>2023 ರಲ್ಲಿ ಶೇ 43 ರಷ್ಟು, 2024 ರಲ್ಲಿ ಶೇ 24 ರಷ್ಟು ಮತ್ತು 2025ರಲ್ಲಿ ಶೇ 44ರಷ್ಟು ಪ್ರಕರಣಗಳ ದಂಡವನ್ನು ವಸೂಲಾತಿ ಮಾಡಲಾಗಿರುತ್ತದೆ.</td></tr>
<tr><td>ಉ)</td><td>ದಂಡ ವಸೂಲಾತಿ ಮೊತ್ತವನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗುತ್ತಿದೆ;<br>ಬಳಕೆಯಾಗಿರುವ ಮೊತ್ತ ಎಷ್ಟು? (ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)</td><td>ಎಲ್ಲಾ ಘಟಕಗಳಿಂದ ಸಂಗ್ರಹವಾಗುವ ಸಂಚಾರ ನಿಯಮ ಉಲ್ಲಂಘನಾ ದಂಡ ಮೊತ್ತದಲ್ಲಿ ಶೇಕಡಾ 50 ರಷ್ಟನ್ನು ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 11 ಇಎಫ್‌ಎಸ್ 2019 ದಿನಾಂಕ: 21.08.20219 ರಂತೆ ರಸ್ತೆ ಸುರಕ್ಷತೆ ಗೆ ನೀಡಲಾಗುತ್ತಿದೆ.</td></tr>
</table>

ಹೆಚ್‌ಡಿ 125 ಎಸ್‌ಎಸ್‌ಟಿ 2026

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು.